# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಜಿ.ಎ.ಜಯಪ್ರಕಾಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗ, ಹೊಸನಗರ ಇವರನ್ನು ಸೇವೆಯಿಂದ ಅಮಾನತ್ತುಗೊಳಿಸುವ ಬಗ್ಗೆ – ಆದೇಶ.

**ಓದಲಾಗಿದೆ:-** ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಶಿವಮೊಗ್ಗ ಇವರ ಪತ್ರ ಸಂಖ್ಯೆ. ಜಿಪಂಶಿ/ಸಿಬ್ಬಂದಿ (2)/ಪಂರಾಇಂ /ಸಿಆರ್–40/ 2016–17 ದಿನಾಂಕ 04.10.2016.

*****

**ಪ್ರಸ್ತಾವನೆ:**

ಮೇಲೆ ಓದಲಾದ ದಿನಾಂಕ 04.10.2016ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಶಿವಮೊಗ್ಗ ಇವರು ಶ್ರೀ ಜಿ.ಎ.ಜಯಪ್ರಕಾಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗ, ಹೊಸನಗರ ಇವರು ದೂರುದಾರರಾದ ಶ್ರೀ ಸುನೀಲ್, ಗುತ್ತಿಗೆದಾರರು ನಿರ್ವಹಿಸಿದ ಅಂಗನವಾಡಿ ಕಟ್ಟಡ ಕಾಮಗಾರಿಯ ಗುತ್ತಿಗೆ ಬಿಲ್ಲಿನ ಮೊತ್ತವನ್ನು ಪಾವತಿಸುವ ಸಂಬಂಧ ರೂ. 15,000/- ಗಳ ಅಕ್ರಮ ಸಂಭಾವನೆಗೆ ಬೇಡಿಕೆ ಇಟ್ಟು ಈ ಪೈಕಿ ರೂ. 10,000/- ಗಳನ್ನು ದಿನಾಂಕ 01.10.2016 ರಂದು ಪಡೆದುಕೊಳ್ಳುತ್ತಿದ್ದ ಸಂದರ್ಭದಲ್ಲಿ ಸದರಿಯವರನ್ನು ಶಿವಮೊಗ್ಗ ಭ್ರಷ್ಟಾಚಾರ ನಿಗ್ರಹ ದಳವು ಟ್ರ್ಯಾಪ್ ಮಾಡಿದ್ದು, ಈ ಸಂಬಂಧ ಭ್ರಷ್ಟಾಚಾರ ಪ್ರತಿಬಂಧಕ ಕಾಯ್ದೆ 1988ರ ಅಡಿ ಪ್ರಕರಣ ಸಂಖ್ಯೆ 3/2016ನ್ನು ದಾಖಲಿಸಿಕೊಂಡು, ಅವರನ್ನು ನ್ಯಾಯಾಂಗ ಬಂಧನಕ್ಕೆ ಒಳಪಡಿಸಿರುವುದಾಗಿ ವರದಿ ಮಾಡಿರುತ್ತಾರೆ.

ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, ನಿಯಮ 10 (2)(ಎ) ರನ್ವಯ ಯಾವುದೇ ಸರ್ಕಾರಿ ನೌಕರರು 48 ಗಂಟೆಗಳಿಗೂ ಮೀರಿದ ಅವಧಿಯಲ್ಲಿ ನ್ಯಾಯಾಂಗ ಬಂಧನದಲ್ಲಿದ್ದರೆ ಅಂತಹ ಅಧಿಕಾರಿ / ನೌಕರರನ್ನು ನ್ಯಾಯಾಂಗ ಬಂಧನದಲ್ಲಿರಿಸಿದ ದಿನಾಂಕದಿಂದ ಅಮಾನತ್ತಿನಲ್ಲಿರಿಸಲಾಗಿದೆಯೆಂದು ಭಾವಿಸತಕ್ಕದ್ದೆಂದು (deemed suspension) ತಿಳಿಸಲಾಗಿದೆ.

ಶ್ರೀ ಜಿ.ಎ.ಜಯಪ್ರಕಾಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಸರ್ಕಾರಿ ನೌಕರರಾಗಿ ಕ್ರಮಬದ್ಧವಾಗಿ ನಿರ್ವಹಿಸಬೇಕಾದ ಕಾರ್ಯವನ್ನು ಪಾಲಿಸದೇ ಗುತ್ತಿಗೆದಾರರಿಗೆ ಬಿಲ್ಲಿನ ಮೊತ್ತ ಪಾವತಿಸಲು ಅಕ್ರಮ ಸಂಭಾವನೆಗೆ ಬೇಡಿಕೆ ಇಟ್ಟು ನಂತರ ರೂ. 10,000/- ಗಳ ಅಕ್ರಮ ಸಂಭಾವನೆಯನ್ನು ಸ್ವೀಕರಿಸುತ್ತಿದ್ದ ಸಂದರ್ಭದಲ್ಲಿ ಭ್ರಷ್ಟಾಚಾರ ನಿಗ್ರಹ ದಳವು ಬೀಸಿದ ಬಲೆಗೆ ಸಿಕ್ಕಿಕೊಂಡಿರುತ್ತಾರೆ. ಈ ಸಂಬಂಧ ಸದರಿ ಅಧಿಕಾರಿಯನ್ನು ದಿನಾಂಕ 01.10.2016 ರಿಂದ 07.10.2016 ರವರೆಗೆ ನ್ಯಾಯಾಂಗ ಬಂಧನದಲ್ಲಿರಿಸಲಾಗಿದ್ದು, ಶಿವಮೊಗ್ಗ ವಿಶೇಷ ನ್ಯಾಯಾಧೀಶರು ದಿನಾಂಕ 07.10.2016ರಂದು ವಿಶೇಷ ಪ್ರಕರಣ ಸಂಖ್ಯೆ ಎಸ್.ಪಿ.ಎಲ್. (ಪಿಸಿ) ಸಿಆರ್. ನಂ.169/2016ರಲ್ಲಿ ನೀಡಿದ ಬೇಲ್‌ನ ಅನುಸಾರ ಬಿಡುಗಡೆಹೊಂದಿರುತ್ತಾರೆ.

ಶ್ರೀ ಜಿ.ಎ.ಜಯಪ್ರಕಾಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ರವರು ಸಾರ್ವಜನಿಕ ನೌಕರರಾಗಿ ತಮ್ಮ ಕರ್ತವ್ಯದಲ್ಲಿ ಸಂಪೂರ್ಣ ನಿಷ್ಠೆ ಹಾಗೂ ಪ್ರಾಮಾಣಿಕತೆ ಪ್ರದರ್ಶಿಸದೇ ಅಕ್ರಮ ಸಂಭಾವನೆಗಾಗಿ ಬೇಡಿಕೆಯಿಟ್ಟು ಸ್ವೀಕರಿಸುವ ಮೂಲಕ ಅಪರಾಧಿಕ ದುರ್ನಡತೆ ಎಸಗಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ ನಿಯಮ 3(1)ನ್ನು ಉಲ್ಲಂಘಿಸಿ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ವರ್ತಿಸಿರುವುದು ಸ್ಪಷ್ಟವಾಗಿರುತ್ತದೆ.

ಆದುದರಿಂದ ಶ್ರೀ ಜಿ.ಎ. ಜಯಪ್ರಕಾಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಎಸಗಿರುವ ಅಪರಾಧಿಕ ದುರ್ನಡತೆಯ ಕುರಿತಂತೆ ಭ್ರಷ್ಟಾಚಾರ ನಿಗ್ರಹ ದಳವು ಕೈಗೊಳ್ಳುವ ಕ್ರಿಮಿನಲ್ ಮೊಕದ್ದಮೆ / ಶಿಸ್ತು ಕ್ರಮವನ್ನು ಕಾಯ್ದಿರಿಸಿ ಅವರನ್ನು ಸೇವೆಯಿಂದ ಅಮಾನತ್ತುಪಡಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ. ಗ್ರಾಅಪ 333 ಜಿಪಅ 2016, ಬೆಂಗಳೂರು,**
**ದಿನಾಂಕ 28.10.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಜಿ.ಎ.ಜಯಪ್ರಕಾಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗ, ಹೊಸನಗರ ಇವರ ವಿರುದ್ಧ ಭ್ರಷ್ಟಾಚಾರ ನಿಗ್ರಹ ದಳವು ದಾಖಲಿಸಿರುವ ಪ್ರಕರಣ ಸಂಖ್ಯೆ 3/2016 ಗೆ ಸಂಬಂಧಿಸಿದಂತೆ ಸದರಿಯವರು ನ್ಯಾಯಾಂಗ ಬಂಧನದಲ್ಲಿ ಕಳೆದ 01.10.2016ರಿಂದ 07.10.2016 ರವರೆಗಿನ ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 10 (2) (ಎ) ರನ್ವಯ ಅಮಾನತ್ತಿನಲ್ಲಿ ಕಳೆದ ಅವಧಿಯೆಂದು (Deemed Suspension) ಪರಿಭಾವಿಸಿ ಆದೇಶಿಸಿದೆ.

ಶ್ರೀ ಜಿ.ಎ.ಜಯಪ್ರಕಾಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯದಲ್ಲಿ ಸಂಪೂರ್ಣ ನಿಷ್ಠೆ ಮತ್ತು ಪ್ರಾಮಾಣಿಕತೆ ಪ್ರದರ್ಶಿಸದೇ ಅಕ್ರಮ ಸಂಭಾವನೆ ಸ್ವೀಕರಿಸಿ ಅಪರಾಧಿಕ ದುರ್ನಡತೆ ಎಸಗಿರುವ ಕಾರಣ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 10 (1) (ಎ) ರನ್ವಯ ಸೇವೆಯಿಂದ ಅಮಾನತ್ತುಗೊಳಿಸಿ ಆದೇಶಿಸಿದೆ.

ಅಮಾನತ್ತಿನ ಅವಧಿಯಲ್ಲಿ ಮೇಲ್ಕಂಡ ಅಧಿಕಾರಿಯು ಸಕ್ಷಮ ಪ್ರಾಧಿಕಾರದ ಅನುಮತಿ ಇಲ್ಲದೇ ಕೇಂದ್ರ ಸ್ಥಾನವನ್ನು ಬಿಡತಕ್ಕದ್ದಲ್ಲ ಹಾಗೂ ಕರ್ನಾಟಕ ನಾಗರೀಕ ಸೇವಾ ನಿಯಮಗಳು ನಿಯಮ 98ರ ಅನುಸಾರ ಜೀವನಾಧಾರ ಭತ್ಯೆಗೆ ಅವರು ಅರ್ಹರಿರುತ್ತಾರೆ.

ಮೇಲ್ಕಂಡ ಅಧಿಕಾರಿಯ ಹುದ್ದೆಯ ಸ್ಥಾನ (ಲೀನ್) ವನ್ನು ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು ರವರ ಕಚೇರಿಗೆ ವರ್ಗಾಯಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿದ್ದೇಶ ಮೊದಲಕಟ್ಟಿ),
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
3. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಶಿವಮೊಗ್ಗ – ಶ್ರೀ ಜಿ.ಎ.ಜಯಪ್ರಕಾಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗ, ಹೊಸನಗರ ಇವರನ್ನು ಕೂಡಲೇ ಕರ್ತವ್ಯದಿಂದ ಬಿಡುಗಡೆಗೊಳಿಸುವಂತೆ ಸೂಚಿಸಿದೆ.
7. ಪೋಲೀಸ್ ಇನ್ಸ್‌ಪೆಕ್ಟರ್, ಭ್ರಷ್ಟಾಚಾರ ನಿಗ್ರಹದಳ, ಶಿವಮೊಗ್ಗ.
8. ಶ್ರೀ ಜಿ.ಎ.ಜಯಪ್ರಕಾಶ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗ, ಹೊಸನಗರ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಶಿವಮೊಗ್ಗ ಇವರ ಮುಖಾಂತರ.
9. *ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ & ಸಿ).*
10. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
11. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಜಂಟಿ ಕಾರ್ಯದರ್ಶಿ ಇವರ ಆಪ್ತ ಕಾರ್ಯದರ್ಶಿ/ ಆಪ್ತ ಸಹಾಯಕರಿಗೆ.
12. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
13. ಹೆಚ್ಚುವರಿ ಪ್ರತಿ:ರಕ್ಷಾ ಕಡತ.